**ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಡಾ.ತಳವಾರ ಸಾಬಣ್ಣಾ, ಇವರ ಶೂನ್ಯವೇಳೆ ಪ್ರಶ್ನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ರಾಜ್ಯದಲ್ಲಿ ಪ್ರತಿವರ್ಷ ನಿಯಮಿತವಾಗಿ ನಡೆಯಬೇಕಿದ್ದ ಕರ್ನಾಟಕ ರಾಜ್ಯ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಕಳೆದ ಎರಡು ವರ್ಷಗಳಿಂದ ನಡೆಯದ ಕಾರಣ ಅಸಂಖ್ಯಾತ ಆಕಾಂಕ್ಷಿಗಳಿಗೆ ಹಾಗೂ ಅತಿಥಿ ಉಪನ್ಯಾಸಕರಿಗೆ ತೊಂದರೆಯಾಗುತ್ತಿದ ಎಂದು ವಿಜಯವಾಣಿ ದಿನಪತ್ರಿಕೆಯಲ್ಲಿ ದಿನಾಂಕ: 06.07.2023ರಂದು ವರದಿಯಾಗಿರುತ್ತದೆ. ಕಳೆದ 2021ರ ಜುಲೈನಲ್ಲಿ ನಡೆದ ಪರೀಕ್ಷೆಯೇ ಅಂತಿಮ. ಆದಾದ ಮೇಲೆ ಕರೋನಾ ನೆಪದಲ್ಲಿ ಪರಿಕ್ಷೆಯೇ ನಡೆಯಲಿಲ್ಲ. 2021ರಲ್ಲಿ ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂದು ಪರೀಕ್ಷೆಯನ್ನು ಮುಂದೂಡಲಾಗುತ್ತಿದೆ. ಕೆ-ಸೆಟ್ ಪರೀಕ್ಷೆಯನ್ನು ಮೈಸೂರು ವಿಶ್ವವಿದ್ಯಾಲಯ ನಡೆಸುತ್ತಿತ್ತು. 2020ನೇ ಸಾಲಿನ ಪರೀಕ್ಷೆಯನ್ನು 2020ರ ಸೆ.27 ಹಾಗೂ 2021 ನೇ ಸಾಲಿನ ಪರೀಕ್ಷೆಯನ್ನು 2021ರ ಜುಲೈ 25ರಂದು ನಡೆಸಿತ್ತು. ಆದರೆ, 2021ನೇ ಸಾಲಿನ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಹಲವು ಸಿಬ್ಬಂದಿಗಳನ್ನು ಹೊಣೆಗಾರರನ್ನಾಗಿ ತನಿಖೆಗೆ ಆದೇಶಿಸಲಾಯಿತು. ಆದರೆ, ಇದರ ವರದಿ ಇನ್ನೂ ಬಹಿರಂಗಗೊಂಡಿಲ್ಲ. ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಅರ್ಹತಾ ಮಾನದಂಡಗಳನ್ನು ಪರಿಷ್ಕರಿಸಿದ್ದು, ಆ ಪ್ರಕಾರ ಸಹಾಯಕ ಪ್ರಾಧ್ಯಾಪಕ ಹುದ್ದೆಗೆ ಪಿಹೆಚ್‌ಡಿ ಐಚ್ಛಿಕವಾಗಿರಿಸಿದೆ. ರಾಷ್ಟ್ರೀಯ ಅರ್ಹತಾ ಪರೀಕ್ಷೆ (ಎನ್‌ಇಟಿ) ರಾಜ್ಯ ಅರ್ಹತಾ ಪರೀಕ್ಷೆ (ಎಸ್‌ಇಟಿ) ಮತ್ತು ರಾಜ್ಯ ಮಟ್ಟದ ಅರ್ಹತಾ ಪರೀಕ್ಷೆ (ಎಸ್‌ಎಲ್‌ಇಟಿ-ಸ್ಲೆಟ್) ಇವುಗಳು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಗೆ ಕನಿಷ್ಠ ಮಾನದಂಡವಾಗಿಸಿದೆ.

ಈ ಹಿನ್ನೆಲೆಯಲ್ಲಿ, ಸರ್ಕಾರವು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕೆ-ಸೆಟ್ ಪರೀಕ್ಷೆ ನಡೆಸಲು ಆದೇಶಿಸಿದೆ. ಆದರೆ, ಕೆಇಎ ಕೂಡ ಕೆ-ಸೆಟ್ ಪರೀಕ್ಷೆ ನಡೆಸಲು ವಿಳಂಬ ನೀತಿ ಅನುಸರಿಸುತ್ತಿದೆ. ಇದರಿಂದ ಅಸಂಖ್ಯಾತ ಆಕಾಂಕ್ಷಿಗಳಿಗೆ ಹಾಗೂ ಅತಿಥಿ ಉಪನ್ಯಾಸಕರಿಗೆ ತೊಂದರೆಯಾಗುತ್ತಿರುವುದರಿಂದ ಕೆ-ಸೆಟ್ ಪರೀಕ್ಷೆಯನ್ನು ನಿಗದಿತ ಅವಧಿಯಲ್ಲಿ ನಡೆಸಲು ಕ್ರಮಕೈಗೊಳ್ಳಬೇಕೆಂದು ಉನ್ನತ ಶಿಕ್ಷಣ ಸಚಿವರನ್ನು ಈ ಮೂಲಕ ಒತ್ತಾಯಿಸುತ್ತೇನೆ.

**ಸರ್ಕಾರದ ಉತ್ತರ:**

ಮೈಸೂರು ವಿಶ್ವವಿದ್ಯಾಲಯವು 2011 ರಿಂದ 2020ರವರೆಗೆ ಒಟ್ಟು 09 ಕೆ-ಸೆಟ್ ಪರೀಕ್ಷೆಗಳನ್ನು ನಡೆಸಿರುತ್ತದೆ. ಸದರಿ ವಿಶ್ವವಿದ್ಯಾಲಯವು 2011 ರಿಂದ ಯುಜಿಸಿಯ Guidelines for State Eligibility Test ಮಾರ್ಗಸೂಚಿಯಂತೆ ಕೆ-ಸೆಟ್ ಪರೀಕ್ಷೆಯನ್ನು ನಡೆಸಿಕೊಂಡು ಬಂದಿರುತ್ತದೆ. ಯುಜಿಸಿಯ ಪತ್ರ ಸಂ. F.7-16/2012(NET/SET), ದಿ:14.01.2020 ರನ್ವಯ ಮೈಸೂರು ವಿಶ್ವವಿದ್ಯಾಲಯವನ್ನು ನೋಡೆಲ್ ಏಜೆನ್ಸಿಯಾಗಿ ಗುರುತಿಸಿ 2020, 2021 ಮತ್ತು 2022ರ ವರ್ಷಗಳವರೆಗೆ ಕೆ-ಸೆಟ್ ಪರೀಕ್ಷೆಯನ್ನು ನಡೆಸಲು ಅನುಮತಿ ನೀಡಿರುತ್ತಾರೆ. ಅದರಂತೆ ವಿಶ್ವವಿದ್ಯಾಲಯವು 2020 ಮತ್ತು 2021ರ ಕೆ-ಸೆಟ್ ಪರೀಕ್ಷೆಯನ್ನು ಪೂರ್ಣಗೊಳಿಸಿರುತ್ತದೆ.

ಆದರೆ, ಮೈಸೂರು ವಿಶ್ವವಿದ್ಯಾಲಯವು 2021ನೇ ಸಾಲಿನ ಜುಲೈನಲ್ಲಿ ನಡೆಸಿದ ಕೆ-ಸೆಟ್ ಪರೀಕ್ಷೆಯ ಫಲಿತಾಂಶ ಪ್ರಕಟಿಸಿದ್ದು, ಈ ಫಲಿತಾಂಶದ ಕುರಿತು ಆಕ್ಷೇಪಿಸಿ, ಹಲವಾರು ಪ್ರಾಧ್ಯಾಪಕರು ಅರ್ಹತೆ ಹೊಂದಿಲ್ಲದವರು ಮುಂಗಡ ಹಣ ಕೊಟ್ಟು OMR Sheet ಗಳನ್ನು ವಿಶ್ವವಿದ್ಯಾಲಯದ ಸಿಬ್ಬಂದಿ/ನೌಕರರ ಸಹಾಯದಿಂದ ಮೌಲ್ಯಮಾಪನ ಮಾಡುವ ಮುಂಚೆ Mark ಮಾಡಿ ಹೆಚ್ಚು ಅಂಕಗಳನ್ನು ಪಡೆದು ಸಾಮಾನ್ಯ ವರ್ಗದಲ್ಲಿ ಅರ್ಹತೆ ಪಡೆದಿರುವುದಾಗಿ ದೂರು ಸಲ್ಲಿಸಿರುತ್ತಾರೆ.

ಸದರಿ ದೂರುಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಮೈಸೂರು ವಿಶ್ವವಿದ್ಯಾಲಯದಲ್ಲಿ 2019-2021ರವರೆಗೆ K-SET ಪರೀಕ್ಷೆಯಲ್ಲಿ ನಡೆದಿದೆ ಎಂದಿರುವ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಆ ಅವಧಿಯಲ್ಲಿ ಸಂಯೋಜನಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಅಧಿಕಾರಿ ಮತ್ತು ವಿಶ್ವವಿದ್ಯಾಲಯದ ಇತರ ಅಧಿಕಾರಿ ವರ್ಗ ಮತ್ತು ಸಿಬ್ಬಂದಿಗಳ ಶಾಮೀಲಾತಿ ಬಗ್ಗೆ ಪಾರದರ್ಶಕವಾಗಿ ತನಿಖೆ ನಡೆಸಲು ಸರ್ಕಾರದಿಂದ ಆದೇಶ ಸಂಖ್ಯೆ: ಇಡಿ 104 ಯುಕೆವಿ 2022, ದಿನಾಂಕ: 17.12.2022ರ ಆದೇಶವನ್ನು ಹೊರಡಿಸಲಾಗಿರುತ್ತದೆ. ಸದರಿ ಸಮಿತಿಯು ನೀಡಿರುವ ವರದಿಯನ್ನು ಮಾನ್ಯ ರಾಜ್ಯಪಾಲರಿಗೆ ಸಲ್ಲಿಸಲು ಕ್ರಮವಹಿಸಲಾಗಿದ್ದು, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಮಾನ್ಯ ರಾಜ್ಯಪಾಲರು ನೀಡುವ ನಿರ್ದೇಶನದನ್ವಯ ಮುಂದಿನ ಅಗತ್ಯ ಕ್ರಮವಹಿಸಲಾಗುತ್ತದೆ.

ಈ ಪ್ರಕರಣದಿಂದಾಗಿ ಯುಜಿಸಿಯಿಂದ ಮಾನ್ಯತೆ ಅಗತ್ಯವಿರುವ ರಾಜ್ಯ ಅರ್ಹತಾ ಪರೀಕ್ಷೆಯನ್ನು ನಡೆಸಲು ಯುಜಿಸಿಯ ಪರಿಕಲ್ಪನೆ ಮತ್ತು ವ್ಯಾಪ್ತಿಯಡಿ ರಾಜ್ಯ ಸರ್ಕಾರವು ಒಂದು ಏಜೆನ್ಸಿಯನ್ನು ಗುರುತಿಸಬಹುದು, ಅದು ವಿಶ್ವವಿದ್ಯಾಲಯವಾಗಿರಬಹುದು ಅಥವಾ ಪ್ರತಿಷ್ಠಿತ ಪರೀಕ್ಷಾ ಸಂಸ್ಥೆ ಅಥವಾ ಉನ್ನತ ಶಿಕ್ಷಣಕ್ಕಾಗಿ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದ ಪ್ರತಿಷ್ಠಿತ ಸಂಸ್ಥೆಯಾಗಿರಬಹುದೆಂಬ ಅವಕಾಶದಡಿ ಪರೀಕ್ಷೆಯನ್ನು ಪಾರದರ್ಶಕತೆಯಿಂದ ನಡೆಸುವ ಸಲುವಾಗಿ 2022ನೇ ಸಾಲನ್ನು ಒಳಗೊಂಡಂತೆ ಮುಂದಿನ ಆದೇಶದವರೆಗೆ ಕೆ-ಸೆಟ್ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ)ದ ಮೂಲಕ ನಡೆಸುವಂತೆ ಸರ್ಕಾರದ ಆದೇಶ ಸಂ. ಇಡಿ 104 ಯುಕೆವಿ 2022, ದಿನಾಂಕ:17.12.2022ರ ಆದೇಶವನ್ನು ಹೊರಡಿಸಲಾಗಿದೆ. ಈ ಮಾಹಿತಿಯನ್ನು ಸಹ UGC (NET Bureau) ಗೆ ದಿನಾಂಕ:03.02.2023ರ ಪತ್ರದಲ್ಲಿ ತಿಳಿಸಿ ಕೆಇಎ ಸಂಸ್ಥೆಯನ್ನು ಕರ್ನಾಟಕ ರಾಜ್ಯದ ನೋಡೆಲ್ ಏಜೆನ್ಸಿಯಾಗಿ ನೇಮಿಸುವಂತೆ ಕೋರಲಾಗಿರುತ್ತದೆ.

ಮುಂದುವರೆದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪರೀಕ್ಷೆ ನಡೆಸಲು Guidelines for the State Eligibility Test (SET) ರ ನಿಯಮ 4.0 ರ ಅವಕಾಶದಡಿ Steering Committee ಮತ್ತು Moderation Committee ಗಳಿಗೆ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಯನ್ನು ನೇಮಿಸಿ ಸರ್ಕಾರದಿಂದ ಸಂ. ಇಡಿ 104 ಯುಕೆವಿ 2022, ದಿನಾಂಕ:18.05.2023ಅನ್ನು ಹೊರಡಿಸಲಾಗಿರುತ್ತದೆ ಹಾಗೂ Guidelines for the State Eligibility Test (SET) ರ ನಿಯಮ 2.4 ರನ್ವಯ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಕೆ-ಸೆಟ್ ಪರೀಕ್ಷೆಯನ್ನು ನಡೆಸಲು ಯುಜಿಸಿಗೆ ಪತ್ರ ಬರೆಯಲು ಈಗಾಗಲೇ ಕ್ರಮವಹಿಸಲಾಗಿದೆ.

Steering committee ಮತ್ತು Moderation Committee ಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಯವರನ್ನು ಹೊರತುಪಡಿಸಿ, ಇತರ ಪೋಷಕ (Supporting) ಸಿಬ್ಬಂದಿಯನ್ನು ಅಗತ್ಯಕ್ಕೆ ಅನುಗುಣವಾಗಿ ನೋಡೆಲ್ ಏಜೆನ್ಸಿ ಅಂದರೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೇಮಿಸಲು ಮತ್ತು ಯುಜಿಸಿಯು State Eligibility Test (SET) ಗೆ ಸಂಬಂಧಿಗೆ ಹೊರಡಿಸಿರುವ Guidelines ರಲ್ಲಿನ ನಿಯಮಗಳನ್ವಯ ಪರೀಕ್ಷೆ ನಡೆಸಲು ಬೇಕಾಗುವ ಎಲ್ಲಾ ಪೂರ್ವ ಸಿದ್ಧತೆಗಳ ಒಂದು ವರದಿಯನ್ನು ಸಿದ್ಧಪಡಿಸಿ, (ಸರ್ಕಾರವು ನಿರ್ವಹಿಸಬೇಕಾದ ಕಾರ್ಯಗಳು ಮತ್ತು State Agency ನಿರ್ವಹಿಸಬೇಕಾದ ಕಾರ್ಯಗಳನ್ನು ಒಳಗೊಂಡಂತೆ) ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (K-SET) ಯ 2022 ಮತ್ತು 2023ನೇ ಸಾಲಿನ ಕರಡು ವೇಳಾಪಟ್ಟಿಯೊಂದಿಗೆ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ದಿನಾಂಕ:26.05.2023 ರಂದು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರಿಗೆ ಪತ್ರ ಬರೆಯಲಾಗಿರುತ್ತದೆ.

ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ 2022ನೇ ಸಾಲನ್ನೂ ಒಳಗೊಂಡಂತೆ ಕೆ-ಸೆಟ್ ಪರೀಕ್ಷೆಯನ್ನು ಕೆಇಎ ಮೂಲಕ ನಡೆಸಲು ಸರ್ಕಾರದ ಹಂತದಲ್ಲಿ ಈಗಾಗಲೇ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದು, ಯುಜಿಸಿಯ ಸಾಮಾನ್ಯ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಪರೀಕ್ಷೆಯನ್ನು ನಿಯಮಾನುಸಾರ ನಡೆಸಲು ಕ್ರಮವಹಿಸಲಾಗುವುದು.

*********************************

ಸಂಖ್ಯೆ: ಇಡಿ 52 ಯುಎಂವಿ 2023

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು